# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಜಿಲ್ಲಾ ಪಂಚಾಯತ್ ಉಪಾಧ್ಯಕ್ಷರುಗಳಿಗೆ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಸರ್ಕಾರದ ಅಧಿಸೂಚನೆ ಸಂ. ಗ್ರಾಅಪ 75 ಜಿಪಸ 2016 ದಿನಾಂಕ 19.11.2016

:–:

**ಪ್ರಸ್ತಾವನೆ:**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳಿಗೆ ಚುನಾವಣೆಗಳ ನಂತರ ಅಧ್ಯಕ್ಷರುಗಳು, ಉಪಾಧ್ಯಕ್ಷರುಗಳು ಆಯ್ಕೆಯಾಗಿರುತ್ತಾರೆ. ಜಿಲ್ಲಾ ಪಂಚಾಯತ್ ಉಪಾಧ್ಯಕ್ಷರುಗಳಿಗೆ ಮೇಲೆ ಓದಲಾದ ದಿನಾಂಕ 19.11.2016 ರ ಸರ್ಕಾರಿ ಅಧಿಸೂಚನೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಪಂಚಾಯಿತಿಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಸಂಬಳ ಮತ್ತು ಭತ್ಯೆಗಳು) (ತಿದ್ದುಪಡಿ) ನಿಯಮಗಳು 2016 ಪ್ರಕಟಿಸಲಾಗಿದ್ದು, ಸದರಿ ನಿಯಮಗಳಲ್ಲಿ ಜಿಲ್ಲಾ ಪಂಚಾಯಿತಿಯ ಉಪಾಧ್ಯಕ್ಷರುಗಳಿಗೆ ವಾಹನ ಸೌಕರ್ಯ ಒದಗಿಸಲು ಅವಕಾಶ ಕಲ್ಪಿಸಲಾಗಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 150 ಕೆಎಸ್‌ಎಸ್ 2016 ಬೆಂಗಳೂರು ದಿನಾಂಕ: 03.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಉಪಾಧ್ಯಕ್ಷರುಗಳಿಗೆ ಆಯಾಯ ಜಿಲ್ಲಾ ಪಂಚಾಯತ್‌ಗಳಲ್ಲಿ ಲಭ್ಯವಿರುವ ಅನುದಾನದಲ್ಲಿ ರೂ. 9.00 ಲಕ್ಷಗಳ (ಒಂಭತ್ತು ಲಕ್ಷ ರೂಪಾಯಿಗಳು) ಆರ್ಥಿಕ ಮಿತಿಯೊಳಗೆ ಹೊಸ ವಾಹನವನ್ನು ಖರೀದಿಸಲು ಸರ್ಕಾರದ ಮಂಜೂರಾತಿ ನೀಡಿದೆ ಹಾಗೂ ಸದರಿ ಹೊಸ ವಾಹನ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 541 ವೆಚ್ಚ–6/2016 ದಿನಾಂಕ 28.02.2017 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

03/04/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
3. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳಿಗೆ
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಜಂಟಿ ಕಾರ್ಯದರ್ಶಿ (ಆಡಳಿತ–2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ಶಾಖಾ ರಕ್ಷಕ ಕಡತ: ಹೆಚ್ಚಿನ ಪ್ರತಿ